**All India Radio: Bangalore**
**Regional Bulletin In Kannada**
**04.04.2024 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**04.04.2024 / 2.30 p.m.**
*******************

ಮುಖ್ಯಾಂಶಗಳು

1. ಮೊದಲ ಹಂತದ ೧೪ ಲೋಕಸಭಾ ಕ್ಷೇತ್ರಗಳಲ್ಲಿ ನಾಮಪತ್ರ ಸಲ್ಲಿಕೆ ಗಡುವು ಇಂದು ಅಂತ್ಯ
2. ತೇಜಸ್ವಿಸೂರ್ಯ, ಹೆಚ್.ಡಿ. ಕುಮಾರಸ್ವಾಮಿ, ಎಸ್.ಪಿ. ಮುದ್ದೆಹನುಮೇಗೌಡ ಸೇರಿದಂತೆ ಪ್ರಮುಖ ನಾಯಕರಿಂದ ನಾಮಪತ್ರ ಸಲ್ಲಿಕೆ
3. ಹೆಚ್ಚುತ್ತಿರುವ ಬಿಸಿಲ ತಾಪ ; ಆರೋಗ್ಯದ ಕಡೆ ನಿಗಾ ವಹಿಸಲು ಹವಾಮಾನ ಇಲಾಖೆ ಸಲಹೆ
4. ಐಪಿಎಲ್ ಕ್ರಿಕೆಟ್: ಪಂಜಾಬ್ ಕಿಂಗ್ಸ್ - ಗುಜರಾತ್ ಟೈಟನ್ಸ್ ತಂಡಗಳ ನಡುವೆ ಹಣಾಹಣಿ

****************

ರಾಜ್ಯದಲ್ಲಿ ಇದೇ ೨೬ರಂದು ನಡೆಯಲಿರುವ ಮೊದಲ ಹಂತದ ೧೪ ಲೋಕಸಭಾ ಕ್ಷೇತ್ರಗಳಿಗೆ ಉಮೇದುವಾರಿಕೆ ಸಲ್ಲಿಕೆ ಪ್ರಕ್ರಿಯೆ ಇಂದು ಅಪರಾಹ್ನ ಅಂತ್ಯವಾಗಲಿದೆ.

ನಾಳೆ ನಾಮಪತ್ರ ಪರಿಶೀಲನೆ ನಡೆಯಲಿದ್ದು, ಇದೇ ೮ ರಂದು ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನವಾಗಿದೆ. ಇಂದು ಮಂಡ್ಯ ಲೋಕಸಭಾ ಕ್ಷೇತ್ರದಿಂದ ಜೆಡಿಎಸ್-ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ಜೆಡಿಎಸ್ ಹಿರಿಯ ನಾಯಕ ಎಚ್.ಡಿ. ಕುಮಾರಸ್ವಾಮಿ, ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ಡಾ. ಸಿ.ಎನ್. ಮಂಜುನಾಥ್ ನಾಮಪತ್ರ ಸಲ್ಲಿಸಿದರು.

ಚಿಕ್ಕಬಳ್ಳಾಪುರದಿಂದ ಬಿಜೆಪಿ ಅಭ್ಯರ್ಥಿಯಾಗಿ ಡಾ. ಕೆ. ಸುಧಾಕರ್, ಬೆಂಗಳೂರು ದಕ್ಷಿಣ ಕ್ಷೇತ್ರದಿಂದ ತೇಜಸ್ವಿ ಸೂರ್ಯ, ಚಿತ್ರದುರ್ಗದಿಂದ ಗೋವಿಂದ ಕಾರಜೋಳ, ಹಾಸನ ಲೋಕಸಭಾ ಕ್ಷೇತ್ರದಿಂದ ಜೆಡಿಎಸ್ ಪ್ರಜ್ವಲ್ ರೇವಣ್ಣ, ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿ ಕ್ಯಾಪ್ಟನ್ ಬ್ರಿಜೇಶ್ ಚೌಟಾ, ಕೋಲಾರ ಲೋಕಸಭಾ ಕ್ಷೇತ್ರದಿಂದ ಜೆಡಿಎಸ್ ಅಭ್ಯರ್ಥಿಯಾಗಿ ಮಲ್ಲೇಶ್ ಬಾಬು ಇಂದು ಉಮೇದುವಾರಿಕೆ ಸಲ್ಲಿಸಿದರು.

****************

ಇದೇ ೨೬ರಂದು ಮೊದಲ ಹಂತದಲ್ಲಿ ರಾಜ್ಯದ ೧೪ ಲೋಕಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದ್ದು, ನಾಮಪತ್ರ ಸಲ್ಲಿಕೆ ಹಾಗೂ ಜಾಗೃತಿ ಕಾರ್ಯಕ್ರಮಗಳು ಚುರುಕುಗೊಂಡಿವೆ.

ದಾವಣಗೆರೆ ಲೋಕಸಭಾ ಕ್ಷೇತ್ರದಲ್ಲಿ ಈ ಬಾರಿ ಶೇಕಡ ೮೫ ಕ್ಕಿಂತ ಅಧಿಕ ಮತದಾನದ ಗುರಿಹೊಂದಲಾಗಿದ್ದು, ಈ ನಿಟ್ಟಿನಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಸುರೇಶ್ ಇಟ್ನಾಳ್ ಹೇಳಿದ್ದಾರೆ.

ದಾವಣಗೆರೆ ರೈಲು ನಿಲ್ದಾಣದಲ್ಲಿಂದು ಶಾಲಾ-ಕಾಲೇಜು ವಿದ್ಯಾರ್ಥಿನಿಯರಿಗೆ ಮತದಾನ ಜಾಗೃತಿ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಂಡಿದ್ದ ರಂಗೋಲಿ ಬಿಡಿಸುವ ಸ್ಪರ್ಧೆ ವೀಕ್ಷಿಸಿ ಅವರು ಮತನಾಡಿದರು.

ಧ್ವನಿ : ಸುರೇಶ್ ಇಟ್ನಾಳ್

ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು ೧೭ ಲಕ್ಷ ೭೦ ಸಾವಿರ ೫೭೭ ಮತದಾರರು ತಮ್ಮ ಹಕ್ಕು ಚಲಾಯಿಸಲಿದ್ದಾರೆ ಎಂದು ಜಿಲ್ಲಾಧಿಕಾರಿ ರಘುನಂದನ್ ಮೂರ್ತಿ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ : ರಘುನಂದನ ಮೂರ್ತಿ

ಕೋಲಾರ ಮೀಸಲು ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ  ಕೆ.ವಿ. ಗೌತಮ್, ಜೆಡಿಎಸ್ ಅಭ್ಯರ್ಥಿಯಾಗಿ ಎಂ. ಮಲ್ಲೇಶ್ ಬಾಬು ಹಾಗೂ ಪಕ್ಷೇತರ ಅಭ್ಯರ್ಥಿಗಳಾಗಿ ಬಿ.ಇ.ವಿಶ್ವನಾಥ್, ಕೆ.ಎಚ್.ಮಧುಸೂದನ, ಎಂ.ಮುನಿನಿಂಗಪ್ಪ, ಆರ್.ರಾಜೇಂದ್ರ, ಅವರುಗಳು ಇಂದು ನಾಮಪತ್ರ ಸಲ್ಲಿಸಿದರು.

ತುಮಕೂರು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಸ್.ಪಿ.ಮುದ್ದ ಹನುಮೇಗೌಡ ಇಂದು ನಾಮಪತ್ರ ಸಲ್ಲಿಸಿದರು.

ಗದಗ ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ ಸಿ.ಬಿ. ದೇವರಮನಿ ಮಾತನಾಡಿ, ಅರ್ಹ ಮತದಾರರು ಮತ ಚಲಾಯಿಸುವ ಮೂಲಕ ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಬೇಕು ಎಂದರು. ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಜರುಗಿದ ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಅವರು, ಮೇ ೭ ರಂದು ನಡೆಯಲಿರುವ ಚುನಾವಣೆಯಲ್ಲಿ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದರು.

ವಿಜಯನಗರದಲ್ಲಿಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸದಾಶಿವ ಪ್ರಭು ಬಿ. ಮಾತನಾಡಿ, ಚುನಾವಣೆಗಳು ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸುವಲ್ಲಿ ಮಹತ್ತರ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ಉತ್ತರಕನ್ನಡ ಜಿಲ್ಲೆಯಲ್ಲಿ ಮಾದರಿ ಚುನಾವಣಾ ನೀತಿ ಸಂಹಿತೆ ಜಾರಿಯಲಿದ್ದು, ಈ ಅವಧಿಯಲ್ಲಿ ದೃಶ್ಯ ಮಾಧ್ಯಮಗಳು, ಕೇಬಲ್ ಟಿವಿ, ಪೇಸ್ಬುಕ್, ವಾಟ್ಸಾಪ್, ಇ-ಪತ್ರಿಕೆಗಳು, ಸೇರಿದಂತೆ ಎಲ್ಲಾ ರೀತಿಯ ಸೋಷಿಯಲ್ ಮೀಡಿಯಾಗಳಲ್ಲಿ, ಯಾವುದೇ ರಾಜಕೀಯ ಪಕ್ಷದ ಅಥವಾ ಚುನಾವಣಾ ಅಭ್ಯರ್ಥಿಯ ಪರವಾಗಿ ಜಾಹೀರಾತು ಪ್ರಕಟಿಸಲು, ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿಯಿಂದ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ತಿಳಿಸಿದ್ದಾರೆ.

****************

ಬೆಂಗಳೂರು ನಗರ ತೀವ್ರ ನೀರಿನ ಬವಣೆ ಅನುಭವಿಸುತ್ತಿದ್ದು, ರಾಜ್ಯ ಸರ್ಕಾರ ಜನರ ಸಂಕಷ್ಟ ನಿವಾರಣೆಗೆ ಗಮನ ಕೊಡುತ್ತಿಲ್ಲ ಎಂದು ಕೇಂದ್ರ ಸಚಿವ ಅನುರಾಗ್ ಸಿಂಗ್ ಠಾಕೂರ್ ಹೇಳಿದ್ದಾರೆ.

ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಪಿಎಫ್ಐ ಹಾಗೂ ಎಸ್‌ಡಿಪಿಐ ಸಂಘಟನೆಗೆ ಆಶ್ರಯ ನೀಡುತ್ತಿದೆ ಎಂದರು. ಕಳೆದ ೧೦ ವರ್ಷಗಳ ಅವಧಿಯಲ್ಲಿ ಕೇಂದ್ರ ಸರ್ಕಾರ ೨೫ ಕೋಟಿ ಜನರನ್ನು ಬಡತನ ರೇಖೆಯಿಂದ ಮೇಲಕ್ಕೆ ತಂದು, ದೇಶದ ಸಮಗ್ರ ಅಭಿವೃದ್ಧಿಗೆ ಗಮನ ಹರಿಸಿದೆ ಎಂದರು.

****************

ರಾಜ್ಯದಲ್ಲಿ ಮುಂದಿನ ೭ ದಿನಗಳಲ್ಲಿ ಬಿಸಿಲ ತಾಪ ಹೆಚ್ಚಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಅವಧಿಯಲ್ಲಿ ಜನರುಕೆಲವು ಮುನ್ನೆಚ್ಚರಿಕೆ ಪಾಲಿಸುವಂತೆ ಸೂಚಿಸಲಾಗಿದೆ.

ವಿಶೇಷವಾಗಿ ೧೨ ಗಂಟೆವರೆಗೆ ಜನರು ಮನೆಯಿಂದ ಹೋರಬರಬಾರದು. ಬಾಯಾರಿಕೆ ಇಲ್ಲದಿದ್ದರೂ ಸಹ ಹೆಚ್ಚಾಗಿ ನೀರು ಕುಡಿಯಬೇಕು. ಸಡಿಲವಾದ, ಹತ್ತಿ ಬಟ್ಟೆಯನ್ನು ಧರಿಸಬೇಕು, ಮನೆಯಿಂದ ಹೊರಗೆ ಹೋಗುವಾಗ ನೀರಿನ ಬಾಟಲ್, ಕೊಡೆ ತೆಗೆದುಕೊಂಡು ಹೋಗಬೇಕು. ಪ್ರೋಟಿನ್, ಬಿಸಿ ಮತ್ತು ಸ್ವಚ್ಛವಾದ ಆಹಾರ ಸೇವಿಸಬೇಕು. ಮನೆಯಲ್ಲಿರುವ ಜಾನುವಾರುಗಳಿಗೆ ನೆರಳು ಮತ್ತು ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಬೇಕು ಎಂದು ಸಲಹೆ ನೀಡಲಾಗಿದೆ.

ಹಾವೇರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರಾಘವೇಂದ್ರಸ್ವಾಮಿ ಮಾತನಾಡಿ, ಬೇಸಿಗೆ ಸಮಯದಲ್ಲಿ ಜನರು ಆರೋಗ್ಯ ಕಾಪಾಡಿಕೊಳ್ಳಲು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದರು.

****************

ಈಗ ದಾವಣಗೆರೆ ಲೋಕಸಭಾ ಕ್ಷೇತ್ರದ ವಿವರಗಳು :

ವರದಿಯನ್ನು ಸಿದ್ಧಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ, -ಕೆ.ಎಸ್. ಚನ್ನಬಸಪ್ಪ

ಕಣ್ಣು ಹಾಯಿಸಿದ ಕಡೆಯಲ್ಲೆಲ್ಲ ದೇವಾಲಯಗಳಿರುವುದರಿಂದ ದೇವನಗರಿ, ಸಾವಿರಾರು ವಿದ್ಯಾಸಂಸ್ಥೆಗಳ ಸ್ಥಾಪನೆಯಿಂದ ವಿದ್ಯಾಕಾಶಿ ಎಂಬ ವಿಶೇಷಗಳ ಮೂಲಕ ಗುರುತಿಸಿಕೊಂಡಿರುವ ದಾವಣಗೆರೆ ಜಿಲ್ಲೆ ೧೮ನೇ ಲೋಕಸಭಾ ಚುನಾವಣೆಗೆ ಸಜ್ಜುಗೊಂಡಿದೆ.

ಮಧ್ಯ ಕರ್ನಾಟಕದ ಈ ಜಿಲ್ಲೆ ಕಲೆ, ಸಾಹಿತ್ಯ, ಶಿಕ್ಷಣ, ರಂಗಭೂಮಿ ಕ್ಷೇತ್ರದಲ್ಲಿನ ಗಮನಾರ್ಹ ಸಾಧನೆಯಿಂದ ವಿಶ್ವಮಟ್ಟದಲ್ಲಿ ಚಿರಪರಿಚಿತಗೊಂಡಿದೆ. ಇಲ್ಲಿ ವೈದ್ಯಕೀಯ, ಇಂಜಿನಿಯರಿಂಗ್, ಎಂಬಿಎ ಮೊದಲಾದ ಉನ್ನತ ಶಿಕ್ಷಣ ಪಡೆದ ಸಾವಿರಾರು ವಿದ್ಯಾವಂತರು ದೇಶ, ವಿದೇಶಗಳಲ್ಲಿ ಸೇವೆ ಸಲ್ಲಿಸುತ್ತಿರುವುದು ಜಿಲ್ಲೆಗೆ ಹೆಮ್ಮೆ ತರುವ ವಿಷಯ. ಪೂನಾ- ಬಾಂಬೆ ರಾಷ್ಟ್ರೀಯ ಹೆದ್ದಾರಿ ಮತ್ತು ಬೆಂಗಳೂರು-ಹುಬ್ಬಳ್ಳಿ ರೈಲು ಸಂಪರ್ಕದಿಂದಾಗಿ ಶತಮಾನಗಳಿಂದಲೂ ವ್ಯಾಪಾರ- ವಹಿವಾಟಿಗೆ ಹೆಸರಾಗಿದೆ. ೨೦೧೧ ರ ಜನಗಣತಿ ಪ್ರಕಾರ ಜಿಲ್ಲೆಯ ಜನಸಂಖ್ಯೆ ೧೯ ಲಕ್ಷದ ೪೫ ಸಾವಿರ.

ದಾವಣಗೆರೆ ಜಿಲ್ಲೆಯ ೭ ಮತ್ತು ನೂತನ ವಿಜಯನಗರ ಜಿಲ್ಲೆಯ ಹರಪನಹಳ್ಳಿ ಸೇರಿದಂತೆ ಒಟ್ಟು ೮ ವಿಧಾನಸಭಾ ಕ್ಷೇತ್ರಗಳನ್ನು ದಾವಣಗೆರೆ ಲೋಕಸಭಾ ಕ್ಷೇತ್ರ ಒಳಗೊಂಡಿದೆ. ೧೯೭೧ ರವರೆಗೂ ಕಾಂಗ್ರೆಸ್ ವಶದಲ್ಲಿದ್ದ ಕ್ಷೇತ್ರವನ್ನು ೧೯೯೬ ರಲ್ಲಿ ಬಿಜೆಪಿ ವಶಪಡಿಸಿಕೊಂಡಿತು. ೧೯೯೮ ರ ಉಪ ಚುನಾವಣೆಯಲ್ಲಿ ಮತ್ತೆ ಕಾಂಗ್ರೆಸ್ ಗೆದ್ದಿತು. ಆದರೆ ನಂತರ ನಡೆದ ೫ ಸಾರ್ವತ್ರಿಕ ಚುನಾವಣೆಯಲ್ಲೂ ಬಿಜೆಪಿ ಸತತ ಗೆಲುವು ಸಾಧಿಸಿದೆ.

ಇದೀಗ ೧೮ ನೇ ಲೋಕಸಭಾ ಚುನಾವಣೆಗೆ ಚುನಾವಣಾ ಆಯೋಗ ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದೆ. ಎರಡನೇ ಹಂತದಲ್ಲಿ ಚುನಾವಣೆ ನಡೆಯಲಿದ್ದು, ಇದೇ ಏಪ್ರಿಲ್ ೧೨ ರಿಂದ ನಾಮಪತ್ರ ಸಲ್ಲಿಕಾ ಕಾರ್ಯ ಆರಂಭವಾಗಲಿದೆ. ಮೇ ೭ ರಂದು ಮತದಾನ ಜರುಗಲಿದೆ. ೨೦೧೯ ರ ಸಾರ್ವತ್ರಿಕ ಚುನಾವಣೆಯಲ್ಲಿ ಶೇ.೭೨.೯೬ರಷ್ಟು ಮತದಾನದ ಹಕ್ಕು ಚಲಾವಣೆಯಾಗಿತ್ತು. ಈ ಬಾರಿ ಮತದಾನ ಪ್ರಮಾಣವನ್ನು ಶೇ.೮೫ ಕ್ಕೆ  ಹೆಚ್ಚಳ ಮಾಡುವ ಗುರಿಯೊಂದಿಗೆ ಜಿಲ್ಲಾ ಸ್ವೀಪ್ ಸಮಿತಿ ಕಾಲೇಜು ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆ, ಮಹಿಳೆಯರಿಗೆ ರಂಗೋಲಿ ಸ್ಪರ್ಧೆ ಮೊದಲಾದ ಅನೇಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.

ಒಟ್ಟು ಮತದಾರರ ಸಂಖ್ಯೆ ೧೬ ಲಕ್ಷದ ೭೯ ಸಾವಿರದ ೭೪೬. ಈ ಪೈಕಿ ೮ ಲಕ್ಷದ ೩೮ ಸಾವಿರದ ೭೦೫ ಪುರುಷರು, ೮ ಲಕ್ಷದ ೪೦ ಸಾವಿರದ ೩೪೦ ಮಹಿಳೆಯರು, ಇತರೆ ೧೩೬ ಹಾಗೂ ೫೬೫ ಸೇವಾ ಮತದಾರರು ಇದ್ದಾರೆ. ೮೫ ವರ್ಷ ಮೇಲ್ಪಟ್ಟ ೧೧ ಸಾವಿರದ ೨೫೮, ೨೦ ಸಾವಿರದ ೩೫೧ ವಿಶೇಷಚೇತನ ಮತದಾರರು ಹಾಗೂ ೧೮೦ ಜನರು ನೂರು ವರ್ಷ ಪೂರೈಸಿದ ಮತದಾರರಿದ್ದಾರೆ.

ವಿಧಾನಸಭಾ ಚುನಾವಣಾ ನಂತರ ೨೦೨೪ ರ ಜನವರಿ ೧ ಕ್ಕೆ ೧೮ ವರ್ಷ ತುಂಬುವ ಯುವ ಮತದಾರರನ್ನು ಸೇರ್ಪಡೆ ಮಾಡಲಾಗಿದ್ದು, ಈ ಪೈಕಿ ೧೯ ಸಾವಿರದ ೫೦೭ ಪುರುಷ, ೧೭ ಸಾವಿರದ ೩೩೯ ಮಹಿಳಾ, ೩ ಇತರೆ ಸೇರಿ ೩೬ ಸಾವಿರದ ೮೪೯ ಯುವ ಮತದಾರರು ಪಟ್ಟಿಯಲ್ಲಿ ಹೆಸರು ನೊಂದಾಯಿಸಿದ್ದಾರೆ.

****************

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿಂದು ಪಂಜಾಬ್ ಕಿಂಗ್ಸ್ ಹಾಗೂ ಗುಜರಾತ್ ಟೈಟನ್ಸ್ ತಂಡಗಳು ಮುಖಾಮುಖಿಯಾಗಲಿವೆ.

ಪಂದ್ಯ ಭಾರತೀಯ ಕಾಲಮಾನ ಸಂಜೆ ೭.೩೦ ಕ್ಕೆ ಆರಂಭವಾಗಲಿದೆ.

********ಮುಕ್ತಾಯ********